**ಕರ್ನಾಟಕ ಸರ್ಕಾರ**

ಸಂಖ್ಯೆ:ಪಸಂಮೀ 138 ಪಅಸೇ 2026

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ
ಡಾ. ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:03-09-2026

**ಅಧಿಸೂಚನೆ**

ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಇಲ್ಲಿನ ಕುಲಪತಿಯವರ ಹುದ್ದೆಯ ಅವಧಿಯು ದಿನಾಂಕ:11.07.2026ಕ್ಕೆ ಅಂತ್ಯಗೊಂಡಿದ್ದು, ಈ ಹುದ್ದೆಯನ್ನು ವಿಶ್ವವಿದ್ಯಾಲಯದ ಧನಸಹಾಯ ಆಯೋಗದ ಮಾರ್ಗಸೂಚಿಗಳು ಮತ್ತು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 2004 ರ ಕಲಂ 13 ರಲ್ಲಿ ವಿಧಿಸಿರುವ ಷರತ್ತು ಮತ್ತು ನಿಬಂಧನೆಗಳಡಿ ಭರ್ತಿ ಮಾಡಲು ಉದ್ದೇಶಿಸಲಾಗಿದೆ.

ಅದರಂತೆ, ವಿಶ್ವವಿದ್ಯಾಲಯದ ಧನಸಹಾಯ ಆಯೋಗದ ಮಾರ್ಗಸೂಚಿಗಳು ಮತ್ತು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ, 2004 ರನ್ವಯ ಕುಲಪತಿಯವರಾಗಿ ನೇಮಕ ಹೊಂದಲು ಬಯಸುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಪಶುವೈದ್ಯಕೀಯ ವಿಜ್ಞಾನ/ಪಶು ವಿಜ್ಞಾನ/ಹೈನು ವಿಜ್ಞಾನ /ಮೀನುಗಾರಿಕೆ ವಿಜ್ಞಾನ ಹಾಗೂ ಈ ಸಂಬಂಧಿತ ಕ್ಷೇತ್ರಗಳಲ್ಲಿ ಪ್ರಾಧ್ಯಾಪಕ ಅಥವಾ ತತ್ಸಮಾನ ವೃಂದಲ್ಲಿ 10 ವರ್ಷ ಅಥವಾ ಅದಕ್ಕೂ ಮೇಲ್ಪಟ್ಟ ಅವಧಿಗೆ ಸೇವೆ ಸಲ್ಲಿಸಿರತಕ್ಕದ್ದು. ಅರ್ಜಿ ಸಲ್ಲಿಸಲು ಬಯಸುವ ಅರ್ಹ ಅಭ್ಯರ್ಥಿಗಳು/ಅಧಿಕಾರಿಗಳು ತಮ್ಮ ಸಂಪೂರ್ಣ ಸೇವಾ ವಿವರಗಳುಳ್ಳ ಅರ್ಜಿಗಳನ್ನು ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ, ಅವಶ್ಯವಿರುವ ವಿವರ/ದಾಖಲೆಗಳೊಂದಿಗೆ ಹಾಗೂ ಅರ್ಜಿದಾರರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ/ಕ್ರಿಮಿನಲ್ ಮೊಕದ್ದಮೆ/ನ್ಯಾಯಾಲಯ ಪ್ರಕರಣ/ಲೋಕಾಯುಕ್ತ ಪ್ರಕರಣ ಇರುವ/ಇಲ್ಲದಿರುವ ಬಗ್ಗೆ ದೃಢೀಕರಣದೊಂದಿಗೆ 5 ಪ್ರತಿಗಳಲ್ಲಿ ಸರ್ಕಾರದ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು ರವರಿಗೆ ಈ ಅಧಿಸೂಚನೆ ಹೊರಡಿಸಿದ ಇಪ್ಪತ್ತು (20) ದಿನಗಳೊಳಗಾಗಿ ಅರ್ಜಿ ಸಲ್ಲಿಸತಕ್ಕದ್ದು.

ಅರ್ಜಿ ಸಲ್ಲಿಸಲು ನಿಗಧಿಪಡಿಸಲಾಗಿರುವ ನಮೂನೆಯನ್ನು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ (www.kvafsu.edu.in) ಪಡೆಯುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

03/09/26.

**(ಕೆ.ವಿ. ಅಶೋಕ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ)

03/09/26

**ಇವರಿಗೆ:- (ಮುಂದಿನ ಸೂಕ್ತ ಕ್ರಮಕ್ಕಾಗಿ ಹಾಗೂ ವಿಶ್ವವಿದ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು)**

1. ಕುಲಪತಿಗಳು, ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರ.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ರಾಯಚೂರು.
3. ಕುಲಪತಿಗಳು, ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಇರುವಕ್ಕಿ, ಶಿವಮೊಗ್ಗ.
4. ಕುಲಪತಿಗಳು, ತೋಟಗಾರಿಕೆ ವಿಶ್ವವಿದ್ಯಾಲಯ ನವನಗರ, ಬಾಗಲಕೋಟೆ.
5. ಕುಲಸಚಿವರು, ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರ. **ಇವರು ಸದರಿ ಅರ್ಜಿಯ ನಮೂನೆಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.**
6. ಕುಲಸಚಿವರು, ಕೃಷಿ /ತೋಟಗಾರಿಕೆ ವಿಶ್ವವಿದ್ಯಾಲಯ, ಬೆಂಗಳೂರು /ಧಾರವಾಡ /ರಾಯಚೂರು/ ಶಿವಮೊಗ್ಗ/ ಬಾಗಲಕೋಟೆ.

**ಪ್ರತಿ**:

1. ಘನವೆತ್ತ ರಾಜ್ಯಪಾಲರ ಕಾರ್ಯದರ್ಶಿಗಳು, ಲೋಕಭವನ ಬೆಂಗಳೂರು.
2. ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಕರು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.